# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 24-03-2021 ಪ್ರಶ್ನೆ ಸಂಖ್ಯೆ : 1702 (2091)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 24-03-2021

ಉತ್ತರಿಸುವ ಸಚಿವರು: ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

ವಿಷಯ : ರಾಜ್ಯದ ಜಲಾಶಯ ಹಾಗೂ ಕೆರೆಗಳಲ್ಲಿ ಮೀನುಗಾರಿಕೆ ಅಭಿವೃದ್ಧಿಪಡಿಸುವ ಬಗ್ಗೆ

(ಅ) ರಾಜ್ಯದ ಜಲಾಶಯ ಹಾಗೂ ಕೆರೆಗಳಲ್ಲಿ ಮೀನುಗಾರಿಕೆ ಅಭಿವೃದ್ಧಿಪಡಿಸಲು ಯಾವ ಯೋಜನೆಗಳನ್ನು ರೂಪಿಸಲಾಗಿದೆ; ಈ ಯೋಜನೆ ಉಪಯೋಗ ಪಡೆಯಲು ಯಾವ ಮಾನದಂಡಗಳನ್ನು ರೂಪಿಸಲಾಗಿದೆ ; (ವಿವರ ನೀಡುವುದು)

(ಆ) 2015-16 ರಿಂದ ಇಲ್ಲಿಯವರೆವಿಗೂ ರಾಜ್ಯದ ಜಲಾಶಯ ಹಾಗೂ ಕೆರೆಗಳಲ್ಲಿ ವಿವಿಧ ಯೋಜನೆಗಳಿಗೆ ಇಲಾಖೆಯಿಂದ ಎಷ್ಟು ಮೀನು ಮರಿಗಳನ್ನು ಯಾವ ಮೂಲಗಳಿಂದ ಬಿಡಲಾಗಿದೆ;

(ಇ) ಜಲಾಶಯ ಮತ್ತು ಕೆರೆಗಳಿಗೆ ಬಿಡಲು ಅವಶ್ಯವಿರುವಷ್ಟು ಮೀನು ಮರಿಗಳ ಪ್ರಮಾಣ ರಾಜ್ಯದಲ್ಲಿ ಲಭ್ಯವಿದೆಯೇ ; ಕಳೆದ 5 ವರ್ಷಗಳಿಂದ ಯಾರಿಂದ ಖರೀದಿಸಲಾಗಿದೆ ; (ವಿವರ ನೀಡುವುದು)

(ಈ) ರಾಜ್ಯದ ಯಾವುದೇ ಭಾಗದಲ್ಲಿ ಹೊಸದಾಗಿ ಮೀನುಮರಿ ಉತ್ಪಾದನಾ ಕೇಂದ್ರ ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಯಾವ ಕ್ರಮಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಉ) ಪ್ರತೀ ವರ್ಷ ಯಾವ ಆಧಾರದ ಮೇಲೆ ತಾಂತ್ರಿಕವಾಗಿ ಜಲಾಶಯ ಮತ್ತು ಕೆರೆಗಳಿಗೆ ಮೀನು ಮರಿ ಬಿಡಲಾಗುತ್ತಿದೆ ? (ವಿವರ ನೀಡುವುದು)